# ರಷ್ಯಾದಲ್ಲಿ ಭಾರತೀಯ ಸಮುದಾಯ ಉದ್ದೇಶಿಸಿ ಪ್ರಧಾನಮಂತ್ರಿ ಭಾಷಣ

ಜುಲೈ 09, 2024

ಪ್ರಧಾನಮಂತ್ರಿ ಶ್ರೀ ನರೇಂದ್ರ ಮೋದಿಯವರು ಇಂದು ಮಾಸ್ಕೋದಲ್ಲಿ ನಡೆದ ಕಾರ್ಯಕ್ರಮದಲ್ಲಿ ರಷ್ಯಾದ ಭಾರತೀಯ ಸಮುದಾಯದೊಂದಿಗೆ ಸಂವಾದ ನಡೆಸಿದರು. ಅವರನ್ನು ಸಮುದಾಯದ ಸದಸ್ಯರು ವಿಶೇಷ ಆತ್ಮೀಯತೆ ಮತ್ತು ಒಲವಿನೊಂದಿಗೆ ಸ್ವಾಗತಿಸಿದರು.

2. ಸಮುದಾಯವನ್ನು ಉದ್ದೇಶಿಸಿ ಮಾತನಾಡಿದ ಪ್ರಧಾನ ಮಂತ್ರಿಗಳು, ಮೊದಲಿಗೆ ಪ್ರೀತಿಯಿಂದ ಸ್ವಾಗತಿಸಿದ ಭಾರತೀಯ ಸಮುದಾಯಕ್ಕೆ ಧನ್ಯವಾದಗಳನ್ನು ಸಲ್ಲಿಸಿದರು. ಜತೆಗೆ ಭಾರತ-ರಷ್ಯಾ ಬಾಂಧವ್ಯವನ್ನು ವೃದ್ಧಿಸುವಲ್ಲಿ ಅವರು ನೀಡಿದ ಕೊಡುಗೆಗಳನ್ನು ಶ್ಲಾಘಿಸಿದರು. 1.4 ಶತಕೋಟಿ ಭಾರತೀಯರ ಪರವಾಗಿ ಅವರೆಲ್ಲರನ್ನೂ ಅಭಿನಂದಿಸಿದ ಪ್ರಧಾನಿ ಮೋದಿಯವರು, ಭಾರತೀಯ ಸಮುದಾಯದೊಂದಿಗಿನ ತಮ್ಮ ಸಂವಾದವು ಅತ್ಯಂತ ವಿಶೇಷವಾದದ್ದು. ಏಕೆಂದರೆ, ತಮ್ಮ ಐತಿಹಾಸಿಕ ಮೂರನೇ ಅವಧಿಯಲ್ಲಿ ಭಾರತೀಯ ಸಮುದಾಯವನ್ನು ಉದ್ದೇಶಿಸಿ ಮಾಡುತ್ತಿರುವ ಮೊದಲ ಭಾಷಣವಿದು ಎಂದರು.

3. ಕಳೆದ ಹತ್ತು ವರ್ಷಗಳಲ್ಲಿ ಭಾರತದಲ್ಲಿ ಆಗಿರುವ ಮತ್ತು ಗೋಚರಿಸುತ್ತಿರುವ ಬದಲಾವಣೆಗಳ ಬಗ್ಗೆ ಪ್ರಧಾನಮಂತ್ರಿಗಳು ಮಾತನಾಡಿದರು. ಇದು ಎಲ್ಲ ಭಾರತೀಯರಿಗೂ ಅತ್ಯಂತ ಹೆಮ್ಮೆಯ ವಿಚಾರ ಎಂದು ಅವರು ಹೇಳಿದರು. ತಮ್ಮ ಮೂರನೇ ಅವಧಿಯಲ್ಲಿ, ಭಾರತವನ್ನು ಜಗತ್ತಿನಲ್ಲೇ ಮೂರನೇ ಅತಿದೊಡ್ಡ ಆರ್ಥಿಕತೆಯಾಗಿ ರೂಪಿಸುವುದೇ ಸರ್ಕಾರದ ಪ್ರಮುಖ ಗುರಿಯಾಗಿದೆ ಎಂದು ಹೇಳಿದರು. ಜಾಗತಿಕ ಅಭಿವೃದ್ಧಿಯಲ್ಲಿ ಗಮನಾರ್ಹ ಶೇಕಡಾವಾರು ಪಾಲು ಹೊಂದಿರುವ ಭಾರತದ ಆರ್ಥಿಕ ಅಭಿವೃದ್ಧಿಯ ಬಗ್ಗೆಯೂ; ದೇಶದ ಡಿಜಿಟಲ್ ಮತ್ತು ಹಣಕಾಸು ತಂತ್ರಜ್ಞಾನದ ಯಶಸ್ಸು; ಅದರ ಹಸಿರು ಅಭಿವೃದ್ಧಿ ಸಾಧನೆಗಳು; ಮತ್ತು ಜನಸಾಮಾನ್ಯನನ್ನು ಸಬಲೀಕರಣಗೊಳಿಸುವಲ್ಲಿ ಭಾರತದ ಪರಿಣಾಮಕಾರಿ ಸಾಮಾಜಿಕ-ಆರ್ಥಿಕ ಕಾರ್ಯಕ್ರಮಗಳ ಬಗ್ಗೆಯೂ ಅವರು ಮಾತನಾಡಿದರು. ಭಾರತದ ಈ ಅಭೂತಪೂರ್ವ ಪರಿವರ್ತನೀಯ ಯಶಸ್ಸಿಗೆ 1.4 ಶತಕೋಟಿ ಭಾರತೀಯರ ಸಮರ್ಪಣೆ, ಬದ್ಧತೆ ಮತ್ತು ಕೊಡುಗೆಯೇ ಕಾರಣ. ಪ್ರತಿಯೊಬ್ಬ ಭಾರತೀಯನೂ ಇಂದು ಭಾರತವನ್ನು ಅಭಿವೃದ್ಧಿ ಹೊಂದಿದ ದೇಶವನ್ನಾಗಿ ಮಾಡುವ ಕನಸು ಕಾಣುತ್ತಿದ್ದಾನೆ. ಹವಾಮಾನ ಬದಲಾವಣೆಯ ಸವಾಲನ್ನು ಎದುರಿಸುವುದರಿಂದ ಹಿಡಿದು ಸುಸ್ಥಿರ ಅಭಿವೃದ್ಧಿಯ ಗುರಿಯನ್ನು ತಲುಪುವವರೆಗೆ, ಭಾರತವು ತನ್ನ ಬದ್ಧತೆ ಮತ್ತು ಪ್ರಯತ್ನಗಳ ಮೂಲಕ -ಒಬ್ಬ ವಿಶ್ವಬಂಧುವಾಗಿ, ಜಗತ್ತಿನ ಸ್ನೇಹಿತನಾಗಿ ಜಾಗತಿಕ ಸಮೃದ್ಧಿಗೆ ಗಮನಾರ್ಹವಾದ ಕೊಡುಗೆಯನ್ನು ನೀಡುತ್ತಿದೆ ಎಂದರು. ಜಾಗತಿಕ ಸಮಸ್ಯೆಗಳ ಪರಿಹಾರಕ್ಕಾಗಿ ಭಾರತ ನೀಡುತ್ತಿರುವ ಶಾಂತಿ, ಮಾತುಕತೆ ಮತ್ತು ರಾಜತಾಂತ್ರಿಕತೆಯ ಕರೆ ಎಲ್ಲೆಡೆ ಅನುರಣಿಸುತ್ತಿದೆ ಎಂದೂ ಅವರು ನುಡಿದರು.

4. ರಷ್ಯಾದೊಂದಿಗೆ ಬಲಿಷ್ಠ ಮತ್ತು ಆಳವಾದ ಪಾಲುದಾರಿಕೆಯನ್ನು ಹೊಂದುವಲ್ಲಿ ಸಕ್ರಿಯ ಪಾತ್ರ ವಹಿಸುವುದನ್ನು ಮುಂದುವರಿಸುವಂತೆ ಪ್ರಧಾನಿ ಮೋದಿಯವರು ಭಾರತೀಯ ಸಮುದಾಯಕ್ಕೆ ಉತ್ತೇಜನ ನೀಡಿದರು. ಕಝಾನ್ ಮತ್ತು ಎಕಾಟೆರಿನ್‌ಬರ್ಗ್‌ನಲ್ಲಿ ಎರಡು ಹೊಸ ಭಾರತೀಯ ಕಾನ್ಸುಲೇಟ್‌ಗಳನ್ನು ತೆರೆಯುವ ನಿರ್ಧಾರವನ್ನು ನಾವು ಕೈಗೊಂಡಿದ್ದು, ಇದು ಉಭಯ ದೇಶಗಳ ಜನರ ನಡುವಿನ ಬಾಂಧವ್ಯವನ್ನು ಮತ್ತಷ್ಟು ಹೆಚ್ಚಿಸಲಿದೆ ಎಂದೂ ಅವರು ಹೇಳಿದರು. ಪ್ರಧಾನಿ ಮೋದಿಯವರ ಈ ಘೋಷಣೆಗೆ ಭಾರೀ ಕರತಾಡನದ ಮೆಚ್ಚುಗೆ ವ್ಯಕ್ತವಾಯಿತು. ರಷ್ಯಾದಲ್ಲಿ ಭಾರತದ ಸಾಂಸ್ಕೃತಿಕ ಪರಂಪರೆಯನ್ನು ಪೋಷಿಸುವ ಮತ್ತು ಬೆಳೆಸುವ ನಿಟ್ಟಿನಲ್ಲಿ ಮತ್ತು ರಷ್ಯಾದ ಜನರೊಂದಿಗೆ ಅದರ ವೈಭವವನ್ನು ಹಂಚಿಕೊಳ್ಳುವ ನಿಟ್ಟಿನಲ್ಲಿ ಭಾರತೀಯ ಸಮುದಾಯದ ಪ್ರಯತ್ನಗಳ ಬಗ್ಗೆ ಅವರು ಮೆಚ್ಚುಗೆ ವ್ಯಕ್ತಪಡಿಸಿದರು.

**ಮಾಸ್ಕೋ**
**ಜುಲೈ 09, 2024**